All India Radio: Bangalore
National Bulletin In Kannada
03.05.2025 : 7.35AM
ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು :

೧. ನವದೆಹಲಿಯಲ್ಲಿಂದು ಮೊದಲ ರಾಷ್ಟ್ರೀಯ ಮಧ್ಯಸ್ಥಿಕೆ ಸಮ್ಮೇಳನಕ್ಕೆ ರಾಷ್ಟ್ರಪತಿ ದ್ರೌಪದಿ ಮುರ್ಮು ಚಾಲನೆ

೨. ಅಂಗೋಲಾ ಅಧ್ಯಕ್ಷರೊಂದಿಗೆ ಇಂದು ಪ್ರಧಾನಿ ನರೇಂದ್ರ ಮೋದಿ ನಿಯೋಗ ಮಟ್ಟದ ಮಾತುಕತೆ

೩. ವೇವ್ಸ್ ಶೃಂಗಸಭೆ; ಕ್ರಿಯೇಟ್ ಇನ್ ಇಂಡಿಯಾ ಮೊದಲನೇ ಆವೃತ್ತಿಗೆ ತೆರೆ

೪. ಎನ್‌ಸಿಬಿಯಿಂದ ನಾಲ್ಕು ರಾಜ್ಯಗಳಾದ್ಯಂತ ೫೪೭ ಕೋಟಿ ರೂಪಾಯಿ ಮೌಲ್ಯದ ಮಾದಕವಸ್ತು ವಶ

೫. ಐಪಿಎಲ್ ಟಿ-೨೦ ಕ್ರಿಕೆಟ್: ಸನ್ ರೈಸರ್ಸ್ ಹೈದರಾಬಾದ್ ವಿರುದ್ಧ ಗುಜರಾತ್ ಟೈಟಾನ್ಸ್‌ಗೆ ೩೮ ರನ್ ಜಯ

**********

ರಾಷ್ಟ್ರಪತಿ ದ್ರೌಪದಿ ಮುರ್ಮು ನವದೆಹಲಿಯಲ್ಲಿ ಇಂದು ಮೊದಲ ರಾಷ್ಟ್ರೀಯ ಮಧ್ಯಸ್ಥಿಕೆ ಸಮ್ಮೇಳನ ಉದ್ಘಾಟಿಸಲಿದ್ದಾರೆ. ಅವರೊಂದಿಗೆ ಭಾರತದ ಮುಖ್ಯ ನ್ಯಾಯಮೂರ್ತಿ ನ್ಯಾಯಮೂರ್ತಿ ಸಂಜೀವ್ ಖನ್ನಾ ಹಾಗೂ ಕೇಂದ್ರ ಕಾನೂನು ಮತ್ತು ನ್ಯಾಯ ಸಚಿವ ಅರ್ಜುನ್ ರಾಮ್ ಮೇಘವಾಲ್ ಸಮ್ಮೇಳನವನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಕಾನೂನು ಮತ್ತು ನ್ಯಾಯ ಸಚಿವಾಲಯದ ಸಹಯೋಗದೊಂದಿಗೆ ಭಾರತದ ಅಟಾರ್ನಿ ಜನರಲ್ ಕಚೇರಿ ಈ ಕಾರ್ಯಕ್ರಮವನ್ನು ಆಯೋಜಿಸುತ್ತಿದೆ. ನವದೆಹಲಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅಟಾರ್ನಿ ಜನರಲ್ ಆರ್ ವೆಂಕಟರಮಣಿ, ಸಮ್ಮೇಳನ ಹೆಚ್ಚಿನ ಸಂಖ್ಯೆಯ ಮಧ್ಯಸ್ಥಿಕೆ ಸಂಸ್ಥೆಗಳನ್ನು ಒಟ್ಟುಗೂಡಿಸುತ್ತದೆ,

ಇದರಿಂದಾಗಿ ಅವರು ಮಧ್ಯಸ್ಥಿಕೆ ಪ್ರಕ್ರಿಯೆಗೆ ಸಂಬಂಧಿಸಿದಂತೆ ಉತ್ತಮ ಅಭ್ಯಾಸಗಳನ್ನು ಚರ್ಚಿಸಬಹುದು ಮತ್ತು ಹಂಚಿಕೊಳ್ಳಬಹುದು ಎಂದು ಹೇಳಿದರು. ಆಕಾಶವಾಣಿಯೊಂದಿಗೆ ಮಾತನಾಡಿದ ಕಾನೂನು ಮತ್ತು ನ್ಯಾಯ ಸಚಿವಾಲಯದ ಜಂಟಿ ಕಾರ್ಯದರ್ಶಿ ಅಜಯ್ ಅರೋರಾ, ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳನ್ನು ಕಡಿಮೆ ಮಾಡಲು ಪ್ರಕರಣಗಳನ್ನು ಪರಿಹರಿಸಲು ಮಧ್ಯಸ್ಥಿಕೆ ಪ್ರಕ್ರಿಯೆಯನ್ನು ಅನುಸರಿಸಲು ಅರ್ಜಿದಾರರನ್ನು ಪ್ರೇರೇಪಿಸುವುದು ಈ ಕಾರ್ಯಕ್ರಮದ ಉದ್ದೇಶವಾಗಿದೆ ಎಂದು ಹೇಳಿದರು.

**********

ಪ್ರಧಾನಿ ನರೇಂದ್ರ ಮೋದಿ ಅವರು ನವದೆಹಲಿಯಲ್ಲಿ ಇಂದು ಅಂಗೋಲಾ ಅಧ್ಯಕ್ಷ ಜೋವೊ ಮ್ಯಾನುಯೆಲ್ ಗೊನ್ಸಾಲ್ವೆಸ್ ಲೂರೆಂಕೊ ಅವರೊಂದಿಗೆ ನಿಯೋಗ ಮಟ್ಟದ ಮಾತುಕತೆ ನಡೆಸಲಿದ್ದಾರೆ. ಮಾತುಕತೆಯ ನಂತರ ಎರಡೂ ದೇಶಗಳ ನಡುವೆ ವಿವಿಧ ಕ್ಷೇತ್ರಗಳಲ್ಲಿ ದ್ವಿಪಕ್ಷೀಯ ಸಹಕಾರವನ್ನು ಹೆಚ್ಚಿಸಲು ಹಲವಾರು ಒಪ್ಪಂದಗಳಿಗೆ ಸಹಿ ಹಾಕುವ ನಿರೀಕ್ಷೆಯಿದೆ. ಅಂಗೋಲಾ ಅಧ್ಯಕ್ಷರು ಭಾರತಕ್ಕೆ ಮೂರು ದಿನಗಳ ಭೇಟಿಗಾಗಿ ನಿನ್ನೆ ನವದೆಹಲಿಗೆ ಆಗಮಿಸಿದರು. ಅವರನ್ನು ವಿಮಾನ ನಿಲ್ದಾಣದಲ್ಲಿ ವಿದೇಶಾಂಗ ವ್ಯವಹಾರಗಳ ರಾಜ್ಯ ಸಚಿವ ಕೀರ್ತಿ ವರ್ಧನ್ ಸಿಂಗ್ ಬರಮಾಡಿಕೊಂಡರು. ಅವರೊಂದಿಗೆ ಹಲವಾರು ಸಚಿವರು, ಹಿರಿಯ ಅಧಿಕಾರಿಗಳು, ವ್ಯಾಪಾರ ಸಂಸ್ಥೆಗಳು ಮತ್ತು ಮಾಧ್ಯಮ ಪ್ರತಿನಿಧಿಗಳು ಸೇರಿದಂತೆ ಉನ್ನತ ಮಟ್ಟದ ನಿಯೋಗವೂ ಆಗಮಿಸಿದೆ. ಅಧ್ಯಕ್ಷ ಲಾರೆಂಕೊ ಅವರಿಗೆ ಇಂದು ರಾಷ್ಟ್ರಪತಿ ಭವನದ ಮುಂಭಾಗದಲ್ಲಿ ಸಾಂಪ್ರದಾಯಿಕ ಸ್ವಾಗತ ಕೋರಲಾಗುವುದು. ರಾಷ್ಟ್ರಪತಿ ದ್ರೌಪದಿ ಮುರ್ಮು ಅವರೊಂದಿಗೆ ಅಧ್ಯಕ್ಷ ಲಾರೆಂಕೊ ಮಾತುಕತೆ ನಡೆಸುವ ಕಾರ್ಯಕ್ರಮವಿದೆ. ಭೇಟಿ ನೀಡುವ ಗಣ್ಯರ ಗೌರವಾರ್ಥ ರಾಷ್ಟ್ರಪತಿ ದ್ರೌಪದಿ ಮುರ್ಮು ಔತಣಕೂಟ ಆಯೋಜಿಸಲಿದ್ದಾರೆ. ೩೮ ವರ್ಷಗಳ ನಂತರ ಅಂಗೋಲಾ ಅಧ್ಯಕ್ಷರೊಬ್ಬರು ಭಾರತಕ್ಕೆ ಭೇಟಿ ನೀಡುತ್ತಿದ್ದಾರೆ. ಈ ವರ್ಷ ಭಾರತ ಮತ್ತು ಅಂಗೋಲಾ ರಾಜತಾಂತ್ರಿಕ ಸಂಬಂಧಗಳ ಸ್ಥಾಪನೆಯ ೪೦ ನೇ ವಾರ್ಷಿಕೋತ್ಸವವನ್ನು ಆಚರಿಸುತ್ತಿರುವ ಸಮಯದಲ್ಲಿ ಅವರ ಈ ಭೇಟಿ ಮಹತ್ವ ಪಡೆದಿದೆ. ನಾಳೆ, ಅಧ್ಯಕ್ಷ ಲಾರೆಂಕೊ ನವದೆಹಲಿಯಲ್ಲಿ ನಡೆಯಲಿರುವ ವ್ಯಾಪಾರ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ, ಇದು ಎರಡೂ ದೇಶಗಳ ನಡುವಿನ ಹೂಡಿಕೆ ಮತ್ತು ವಾಣಿಜ್ಯ ಸಂಪರ್ಕಗಳನ್ನು ಉತ್ತೇಜಿಸುವ ಗುರಿಯನ್ನು ಹೊಂದಿದೆ. ೨೦೨೩-೨೦೨೪ರ ಅವಧಿಯಲ್ಲಿ ಭಾರತ-ಅಂಗೋಲಾ ನಡುವಿನ ದ್ವಿಪಕ್ಷೀಯ ವ್ಯಾಪಾರ

೪.೧೯೨ ಶತಕೋಟಿ ಡಾಲರ್ ತಲುಪಿದೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ಅಭಿವೃದ್ಧಿ ಪಾಲುದಾರಿಕೆ, ಸಾಮರ್ಥ್ಯ-ನಿರ್ಮಾಣ ಸಹಕಾರ ಮತ್ತು ರಕ್ಷಣಾ ಸಂಬಂಧಗಳು ಸಹ ವಿಸ್ತರಿಸುತ್ತಿವೆ. ವಿಶ್ವಸಂಸ್ಥೆ ಸೇರಿದಂತೆ ವಿವಿಧ ಬಹುಪಕ್ಷೀಯ ವೇದಿಕೆಗಳಲ್ಲಿ ಎರಡೂ ದೇಶಗಳು ಪರಸ್ಪರ ಉಮೇದುವಾರಿಕೆಯನ್ನು ಬೆಂಬಲಿಸುತ್ತವೆ.

**********

ಆಂಧ್ರಪ್ರದೇಶದ ಅಮರಾವತಿಯಲ್ಲಿ ಸುಮಾರು ೫೮ ಸಾವಿರ ಕೋಟಿ ರೂಪಾಯಿಗೂ ಅಧಿಕ ವೆಚ್ಚದ ಹಲವು ಅಭಿವೃದ್ಧಿ ಯೋಜನೆಗಳನ್ನು ಪ್ರಧಾನಿ ನರೇಂದ್ರ ಮೋದಿ ಶಂಕುಸ್ಥಾಪನೆ ಮತ್ತು ಲೋಕಾರ್ಪಣೆಗೊಳಿಸಿದರು. ಈ ವೇಳೆ ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ, ಈ ಯೋಜನೆಗಳು ಆಂಧ್ರಪ್ರದೇಶದ ಆಕಾಂಕ್ಷೆಗಳು ಮತ್ತು ವಿಕಸಿತ ಭಾರತದ ಆಶಯಗಳಿಗೆ ಬಲವಾದ ಅಡಿಪಾಯವನ್ನು ರೂಪಿಸುತ್ತದೆ ಎಂದು ಹೇಳಿದರು.  ಕಳೆದ ಹತ್ತು ವರ್ಷಗಳಲ್ಲಿ ದೇಶವು ಭೌತಿಕ, ಡಿಜಿಟಲ್ ಮತ್ತು ಸಾಮಾಜಿಕ ಮೂಲಸೌಕರ್ಯದ ಮೇಲೆ ವ್ಯಾಪಕವಾಗಿ ಗಮನಹರಿಸಿದೆ. ಮೂಲಸೌಕರ್ಯವೇಗವಾಗಿ ಅಭಿವೃದ್ಧಿ ಹೊಂದುತ್ತಿರುವ ದೇಶಗಳಲ್ಲಿ ಭಾರತಒಂದು ಎಂದರು. ಎನ್‌ಡಿಎ ಸರ್ಕಾರವು ವಿಶೇಷವಾಗಿ ರೈತರ ಅಭಿವೃದ್ಧಿಯತ್ತ ಗಮನಹರಿಸಿದೆ. ಕಳೆದ ಹತ್ತು ವರ್ಷಗಳಲ್ಲಿ ಕೇಂದ್ರ ಸರ್ಕಾರ ರೈತರಿಗೆ ಕೈಗೆಟಕುವ ದರದಲ್ಲಿ ರಸಗೊಬ್ಬರ ಮತ್ತು ಬಿತ್ತನೆ ಬೀಜಗಳನ್ನು ಒದಗಿಸಲು ೧೨ ಲಕ್ಷ ಕೋಟಿ ರೂಪಾಯಿಗಳನ್ನು ವೆಚ್ಚ ಮಾಡಿದೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದ್ದಾರೆ.

**********

ಮುಂಬೈನಲ್ಲಿ ನಡೆದ ವಿಶ್ವ ಶ್ರವಣ ದೃಶ್ಯ ಮತ್ತು ಮನರಂಜನಾ ಶೃಂಗಸಭೆ - ವೇವ್ಸ್ - ೨೦೨೫ರಲ್ಲಿ ಕ್ರಿಯೇಟ್ ಇನ್ ಇಂಡಿಯಾ ಚಾಲೆಂಜ್‌ನ ಮೊದಲ ಆವೃತ್ತಿ ನಿನ್ನೆ ಮುಕ್ತಾಯಗೊಂಡಿದೆ. ಅನಿಮೇಷನ್, ಗೇಮಿಂಗ್ ಮತ್ತು ಚಲನಚಿತ್ರ ನಿರ್ಮಾಣದಿಂದ AI ಸಂಗೀತ ಮತ್ತು ಡಿಜಿಟಲ್ ಕಲೆಯವರೆಗೆ ಮಾಧ್ಯಮ ಮತ್ತು ಮನರಂಜನಾ ಉದ್ಯಮದ ಪ್ರತಿಯೊಂದು ಕ್ಷೇತ್ರವನ್ನು ವ್ಯಾಪಿಸಿರುವ ಕ್ರಿಯೇಟ್ ಇನ್ ಇಂಡಿಯಾ ಚಾಲೆಂಜ್ ಅಡಿಯಲ್ಲಿ ೩೨ ವಿಭಿನ್ನ ಸವಾಲುಗಳ ವಿಜೇತರನ್ನು ಶೃಂಗಸಭೆಯಲ್ಲಿ ಗೌರವಿಸಲಾಯಿತು. ೬೦ಕ್ಕೂ ಹೆಚ್ಚು ದೇಶಗಳಿಂದ ೧ ಸಾವಿರದ ನೂರಕ್ಕೂ ಹೆಚ್ಚು ಅಂತಾರಾಷ್ಟ್ರೀಯ ಸದಸ್ಯರು ಸೇರಿದಂತೆ ಒಂದು ಲಕ್ಷಕ್ಕೂ ಹೆಚ್ಚು ಮಂದಿ ಸ್ಪರ್ಧೆಗೆ

ನೋಂದಾಯಿಸಿಕೊಂಡಿದ್ದರು. ಈ ಸಂದರ್ಭದಲ್ಲಿ ಮಾತನಾಡಿದ ಕೇಂದ್ರ ಮಾಹಿತಿ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್, ಇದೊಂದು ಐತಿಹಾಸಿಕ ಕ್ಷಣವಾಗಿದ್ದು, ಮೊದಲ ಬಾರಿಗೆ ಸೃಜನಶೀಲತೆಗಾಗಿ ಮಾತ್ರ ಪ್ರಶಸ್ತಿಯನ್ನು ನೀಡಲಾಗುತ್ತಿದೆ ಎಂದು ಹೇಳಿದರು.

***ಧ್ವನಿ*** ಅಶ್ವಿನಿ ವೈಷ್ಣವ್

**********

ಕೇಂದ್ರ ಮಾಹಿತಿ ಮತ್ತು ಪ್ರಸಾರ ಸಚಿವಾಲಯು ಮುಂಬೈನಲ್ಲಿಂದು ನಡೆಯುವ ವೇವ್ಸ್ ೨೦೨೫ ಕಾರ್ಯಕ್ರಮದಲ್ಲಿ ಮಾಧ್ಯಮ ಮತ್ತು ಮನರಂಜನಾ ವಲಯದ ೨೦೨೪-೨೫ರ ಅಂಕಿ-ಅಂಶಗಳ ಕೈಪಿಡಿಯನ್ನು ಬಿಡುಗಡೆ ಮಾಡಲಿದೆ. ಮಾಧ್ಯಮ ಮತ್ತು ಮನರಂಜನಾ ವಲಯದ ಬಗ್ಗೆ ಸಕಾಲಿಕ, ವಿಶ್ವಾಸಾರ್ಹ, ಅಧಿಕೃತ ಮತ್ತು ಸಮಗ್ರ ದತ್ತಾಂಶದ ಅಗತ್ಯವನ್ನು ಸರ್ಕಾರ ದೃಢೀಕರಿಸುವ ಭಾಗವಾಗಿ ಈ ಕೈಪಿಡಿ ಇದೆ. ಮಾಧ್ಯಮ ಮತ್ತು ಮನರಂಜನೆಯು ಸೇವಾ ವಲಯದ ಪ್ರಮುಖ ಅಂಶವಾಗಿದ್ದು, ಇದು ದೇಶದ ಆರ್ಥಿಕತೆಯ ಬೆಳವಣಿಗೆಗೆ ಕೊಡುಗೆ ನೀಡುವ ದೊಡ್ಡ ಸಾಮರ್ಥ್ಯವನ್ನು ಹೊಂದಿದೆ ಎಂದು ಸಚಿವಾಲಯ ತಿಳಿಸಿದೆ. ಈ ವಲಯವು ೨೦೨೭ ರಲ್ಲಿ ಸಿಎಜಿಆರ್ ಶೇಕಡ ೭ ರಷ್ಟು ಬೆಳೆದು, ಮೂರು ಸಾವಿರ ಶತಕೋಟಿ ರೂಪಾಯಿಗಳಿಗೆ ತಲುಪುವ ನಿರೀಕ್ಷೆಯಿದೆ.

**********

ಮಾದಕ ದ್ರವ್ಯ ನಿಯಂತ್ರಣ ಬ್ಯೂರೋ-ಎನ್‌ಸಿಬಿ ಯ ಅಮೃತಸರ ವಲಯ ಘಟಕ, ನಾಲ್ಕು ರಾಜ್ಯಗಳಲ್ಲಿ ನಾಲ್ಕು ತಿಂಗಳ ಕಾಲ ನಡೆಸಿದ ಕಾರ್ಯಾಚರಣೆಯ ಮೂಲಕ, ಮಾದಕ ವಸ್ತು ವಹಿವಾಟು ಜಾಲವನ್ನು ಭೇದಿಸಿ, ೫೪೭ ಕೋಟಿ ರೂಪಾಯಿ ಮೌಲ್ಯದ ಮಾದಕ ವಸ್ತುವನ್ನು ವಶಪಡಿಸಿಕೊಂಡು ೧೫ ಜನರನ್ನು ಬಂಧಿಸಿದೆ ಎಂದು ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಅಮಿತ್ ಶಾ ಎನ್‌ಸಿಬಿಯನ್ನು ಅಭಿನಂದಿಸುತ್ತಾ, ಭಾರತ, ಮಾದಕ ವಸ್ತು ಜಾಲಗಳ ಮೇಲೆ ನಿರ್ದಾಕ್ಷಿಣ್ಯವಾಗಿ ದಾಳಿ ಮಾಡುತ್ತಿದೆ ಎಂದು ಹೇಳಿದ್ದಾರೆ. ಪ್ರಧಾನಿ ನರೇಂದ್ರ ಮೋದಿಯವರ ದೃಷ್ಟಿಕೋನದಡಿ, ಮಾದಕ ವಸ್ತು ಮುಕ್ತ ಭಾರತ ನಿರ್ಮಿಸುವತ್ತ ಇದು ಒಂದು ದೊಡ್ಡ ಹೆಜ್ಜೆ ಎಂದು ಅವರು ಬಣ್ಣಿಸಿದ್ದಾರೆ.

**********

ಜಾತಿ- ಜನಗಣತಿ ಕುರಿತು ಕಾಂಗ್ರೆಸ್ ಗೊಂದಲ ಸೃಷ್ಟಿಸಲು ಪ್ರಯತ್ನಿಸುತ್ತಿದೆ ಎಂದು ಬಿಜೆಪಿ ಆರೋಪಿಸಿದೆ. ಪಕ್ಷದ ವಕ್ತಾರ ಸಂಬಿತ್ ಪಾತ್ರ ನವದೆಹಲಿಯಲ್ಲಿ ನಿನ್ನೆ ಮಾಧ್ಯಮಗಳೊಂದಿಗೆ ಮಾತನಾಡಿ, ಕಾಂಗ್ರೆಸ್ ಮತ್ತು ಅದರ ಮಿತ್ರಪಕ್ಷಗಳು ಆರು ದಶಕಗಳಿಗೂ ಹೆಚ್ಚು ಕಾಲ ಅಧಿಕಾರದಲ್ಲಿದ್ದರೂ, ಅವರು ಎಂದಿಗೂ ಜಾತಿ ಜನಗಣತಿಯನ್ನು ನಡೆಸಿಲ್ಲ ಎಂದು ಟೀಕಿಸಿದರು. ಬಿಜೆಪಿ ನೇತೃತ್ವದ ಸರ್ಕಾರ, ಜಾತಿ-ಜನಗಣತಿಯನ್ನು ನಡೆಸುತ್ತಿರುವುದು ಇದೇ ಮೊದಲು ಎಂದು ಹೇಳಿದ ಅವರು, ಈ ಕ್ರಮ ಕೈಗೊಳ್ಳುತ್ತಿರುವುದು ಜನರ ಧ್ರುವೀಕರಣಕ್ಕಾಗಿ ಅಲ್ಲ, ನೀತಿ ಪರಿವರ್ತನೆಗಾಗಿ ಎಂದು ಹೇಳಿದರು. ಇದಕ್ಕೂ ಮುನ್ನ ಕಾಂಗ್ರೆಸ್, ಜಾತಿ ಸಮೀಕ್ಷೆಯ ಪ್ರತಿಯೊಂದು ಹಂತಕ್ಕೂ ಸಮಯವನ್ನು ಘೋಷಿಸುವಂತೆ, ಕೇಂದ್ರ ಸರ್ಕಾರವನ್ನು ಒತ್ತಾಯಿಸಿತ್ತು. ನವದೆಹಲಿಯಲ್ಲಿ ನಡೆದ ಕಾರ್ಯಕಾರಿ ಸಮಿತಿ ಸಭೆಯಲ್ಲಿ ಈ ನಿಟ್ಟಿನಲ್ಲಿ ಕಾಂಗ್ರೆಸ್ ನಿರ್ಣಯವನ್ನು ಅಂಗೀಕರಿಸಿತ್ತು. ಎರಡು ದಿನಗಳ ಹಿಂದೆ, ಕೇಂದ್ರ ಸರ್ಕಾರ, ಮುಂಬರುವ ಜನಗಣತಿಯಲ್ಲಿ, ಜಾತಿ ಗಣತಿಯನ್ನು ಸೇರಿಸಲಾಗುವುದು ಎಂದು ಘೋಷಿಸಿತು.

**********

ಉತ್ತರ ಪ್ರದೇಶದ ಶಹಜಹಾನ್‌ಪುರ ಜಿಲ್ಲೆಯ ಗಂಗಾ ಎಕ್ಸ್‌ಪ್ರೆಸ್‌ವೇಯ ೩.೫ ಕಿಲೋಮೀಟರ್ ವಾಯುನೆಲೆಯಲ್ಲಿ, ಭಾರತೀಯ ವಾಯುಪಡೆಯು ನಿನ್ನೆ ಪ್ರಮುಖ ಸಮರಾಭ್ಯಾಸ ನಡೆಸಿತು, ಭಾರತೀಯ ವಾಯುಪಡೆಯ ಕಾರ್ಯಾಚರಣೆಯ ಸಾಮರ್ಥ್ಯದ ಅದ್ಭುತ ಪ್ರದರ್ಶನವನ್ನು ಪ್ರದರ್ಶಿಸಿತು.

**********

ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಸನ್ ರೈಸರ್ಸ್ ಹೈದರಾಬಾದ್ ತಂಡದ ವಿರುದ್ಧ ಗುಜರಾತ್ ಟೈಟಾನ್ಸ್ ತಂಡ ೩೮ ರನ್ ಗಳ ಜಯ ಸಾಧಿಸಿದೆ. ಸನ್ ರೈಸರ್ಸ್ ಹೈದರಾಬಾದ್ ಟಾಸ್ ಗೆದ್ದು ಫೀಲ್ಡಿಂಗ್ ಆಯ್ದುಕೊಂಡಿತು. ಮೊದಲು ಬ್ಯಾಟ್ ಮಾಡಿದ ಗುಜರಾತ್ ತಂಡ ನಿಗದಿತ ೨೦ ಓವರ್ ಗಳಲ್ಲಿ ೬ ವಿಕೆಟ್ ನಷ್ಟಕ್ಕೆ ೨೨೪ ರನ್ ಗಳ ಬೃಹತ್ ಮೊತ್ತ ಪೇರಿಸಿತು. ೨೨೫ ರನ್ ಗೆಲುವಿನ ಗುರಿ ಬೆನ್ನತ್ತಿದ ಹೈದರಾಬಾದ್ ತಂಡ ೨೦ ಓವರ್ ಗಳಲ್ಲಿ ೬ ವಿಕೆಟ್ ನಷ್ಟಕ್ಕೆ ೧೮೬ ರನ್ ಗಳಿಸಲಷ್ಟೇ ಶಕ್ತವಾಗಿ

ಸೋಲೊಪ್ಪಿತು. ಗುಜರಾತ್ ಪರ ಮೊಹಮದ್ ಸಿರಾಜ್ , ಪ್ರಸಿದ್ಧ ಕೃಷ್ಣ ತಲಾ ೨ ವಿಕೆಟ್ ಹಾಗೂ ಇಶಾಂತ್ ಶರ್ಮಾ, ಕೋಯಿಡ್ಸೀ ತಲಾ ಒಂದು ವಿಕೆಟ್ ಪಡೆದರು. ಈ ಸೋಲಿನೊಂದಿಗೆ ಸನ್ ರೈಸರ್ಸ್ ಹೈದರಾಬಾದ್ ತಂಡ ಪ್ರಸಕ್ತ ಸಾಲಿನ ಐಪಿಎಲ್ ಟೂರ್ನಿಯಿಂದ ಹೊರಬಿದ್ದಂತಾಗಿದೆ. ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಇಂದು ರಾತ್ರಿ ೭.೩೦ಕ್ಕೆ ನಡೆಯಲಿರುವ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ, ಚೆನ್ನೈ ಸೂಪರ್ ಕಿಂಗ್ಸ್ ತಂಡವನ್ನು ಎದುರಿಸಲಿದೆ.

**********

ಭುವನೇಶ್ವರದಲ್ಲಿ ನಿನ್ನೆ ನಡೆದ ಅಖಿಲ ಭಾರತ ಫುಟ್ಬಾಲ್ ಒಕ್ಕೂಟ -ಎಐಎಫ್ಎಫ್ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಸುಭಾಷಿಶ್ ಬೋಸ್ ಅವರನ್ನು ವರ್ಷದ ಆಟಗಾರ ಎಂದು ಘೋಷಿಸಲಾಗಿದೆ. ಸೌಮ್ಯ ಗುಗುಲೋತ್ ಅವರಿಗೆ ಪ್ರಸಕ್ತ ಋತುವಿನ ಮಹಿಳಾ ಆಟಗಾರ್ತಿ ಪ್ರಶಸ್ತಿ ನೀಡಲಾಗಿದೆ. ಖಾಲಿದ್ ಜಮಿಲ್ ಅವರನ್ನು ಅತ್ಯುತ್ತಮ ತರಬೇತುದಾರ ಹಾಗು ಸುಜಾತಕರ್ ಅವರನ್ನು ಅತ್ಯುತ್ತಮ ಮಹಿಳಾ ತರಬೇತುದಾರ ಎಂದು ಘೋಷಿಸಲಾಗಿದೆ.

**********